**ದಿನಾಂಕ: 04.06.2022 ರಂದು ಮಧ್ಯಾಹ್ನ 3:00 ಗಂಟೆಗೆ ವಾರ್ಡ್ ಸಂಖ್ಯೆ 180 ಬನಶಂಕರಿ ದೇವಸ್ಥಾನ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.**

***ಹಾಜರಿದ್ದ ಅಧಿಕಾರಿಗಳು:-***

1. ಶ್ರೀ. ಸತೀಶ್ ಕುಮಾರ್ – ಅಧ್ಯಕ್ಷರು ಮತ್ತು ನೋಡೆಲ್ ಅಧಿಕಾರಿಗಳು.
2. ಶ್ರೀ. ಮಂಜುನಾಥ್ ವೆಂಕಣ್ಣ ನಾಯಕ – ಸಹಾಯಕ ಅಭಿಯಂತರರು (ವಾಡ್ 180 ಬನಶಂಕರಿ ದೇವಸ್ಥಾನ) (ಕಿಯೋನಿಕ್ಸ್)
3. ಶ್ರೀ. ಶಿವರುದ್ರಯ್ಯ – ಹಿ.ಆ.ಪ (ವಾಡ್ 180 ಬನಶಂಕರಿ ದೇವಸ್ಥಾನ)
4. ಶ್ರೀ. ಚಂದನ್. ಜೆ – ಕಿ.ಆ.ಪ (ವಾಡ್ 180 ಬನಶಂಕರಿ ದೇವಸ್ಥಾನ)
5. ಶ್ರೀ. Syed Muiez – ಸಹಾಯಕ ಅಭಿಯಂತರರು, ಬಿಡಬ್ಲ್ಯೂಎಸ್ಎಸ್‌ಬಿ.

ಮೇಲೆ ಹಾಜರಿದ್ದ ಅಧಿಕಾರಿಗಳು ಹಾಗೂ ಸಮಿತಿ ಸದಸ್ಯರ ಸಮ್ಮುಖದಲ್ಲಿ ವಾರ್ಡ್ ಸಂಖ್ಯೆ 180 ರ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು (ಕಿಯೋನಿಕ್ಸ್) ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆ ಸೇರಿರುವ ಉದ್ದೇಶ ಮತ್ತು ಸಭೆಯ ಮಹತ್ವವನ್ನು ಸದಸ್ಯರ ಮುಖ ಪರಿಚಯದೊಂದಿಗೆ ವಿವರಿಸುತ್ತಾ, ಹಾಜರಿದ್ದ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ಸ್ವಾಗತ ಕೋರಿದರು.

ಈ ಹಿಂದಿನ ಸಭೆಯಲ್ಲಿ ನಡೆಯದ ವಿಷಯಗಳ ಬಗ್ಗೆ ಸುಧೀರ್ಘವಾಗಿ ಚರ್ಚಿಸಲಾಗಿದೆ. ಅಧಿಕಾರಿಗಳಿಗೆ ನಿಗಧಿತ ಅವಧಿಯೊಳಗೆ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿ, ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

1. ವಾರ್ಡ್ ವ್ಯಾಪ್ತಿಯಲ್ಲಿ ಕುಡಿಯುವ ನೀರು ಮತ್ತು ಒಳಚರಂಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ.

   ಸಾರ್ವಜನಿಕರು ಟೀಚರ್ಸ್ ಕಾಲೋನಿಯಲ್ಲಿ ಕುಡಿಯುವ ನೀರಿನ ಪೈಪ್ ಒಡೆದುಹೋಗಿ ಕುಡಿಯುವ ನೀರಿಗೆ ಸಮಸ್ಯೆಯಾಗಿರುತ್ತದೆ ಎಂದು ದೂರು ಬಂದ ಹಿನ್ನಲೆಯಲ್ಲಿ ಸಹಾಯಕ ಅಭಿಯಂತರರು, ಬಿಡಬ್ಲ್ಯೂಎಸ್ಎಸ್‌ಬಿ ರವರು ಸರಿಪಡಿಸಲಾಗಿರುತ್ತದೆ ಎಂದು ತಿಳಿಸಿದರು.

2. ವಾರ್ಡ್‌ನಲ್ಲಿ ಘನತ್ಯಾಜ್ಯ ಸಂಗ್ರಹಣೆ ಮತ್ತು ಡೆಬ್ರಿಸ್ ವಿಲೇವಾರಿ ಬಗ್ಗೆ.

ವಾರ್ಡ್ ವ್ಯಾಪ್ತಿಯ 9ನೇ ಮುಖ್ಯರಸ್ತೆಯಲ್ಲಿರುವ ಬಿಎಸ್ಎನ್ಎಲ್ ಕಚೇರಿಯ ಹತ್ತಿರ ಕಸದ ರಾಶಿ ಇರುವುದಾಗಿ ಬಿಎಸ್ಎನ್ಎಲ್ ರವರು ದೂರು ನೀಡಿರುತ್ತಾರೆ. ಅದರಂತೆ ಕಿರಿಯ ಆರೋಗ್ಯ ಪರಿವೀಕ್ಷಕರು ಸದರಿ ಕಸದ ರಾಶಿಯನ್ನು ತೆರವುಗೊಳಿಸಲಾಗಿರುತ್ತದೆ. ಟೀಚರ್ಸ್ ಕಾಲೋನಿಯ 6ನೇ ಅಡ್ಡರಸ್ತೆಯ ಖಾಸಗಿ ಸ್ವತ್ತಿನಲ್ಲಿ ಸೊಳ್ಳೆಗಳ ಸಮಸ್ಯೆ ಜಾಸ್ತಿಯಾಗಿ ಸುತ್ತಮುತ್ತಲಿನ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುತ್ತದೆ. ಆದ್ದರಿಂದ ಸದರಿ ಸ್ವತ್ತಿ ಔಷಧಿ ಸಂಪಡಿಸಲಾಗಿರುತ್ತದೆ ಎಂದು ಕಿರಿಯ ಆರೋಗ್ಯ ಪರಿವೀಕ್ಷಕರು ರವರು ತಿಳಿಸಿರುತ್ತಾರೆ.

3. ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ.

ಹಿಂದಿನ ಸಭೆಯಲ್ಲಿ ಬಿಡಬ್ಲ್ಯೂಎಸ್ಎಸ್‌ಬಿ ರಸ್ತೆ ಅಗೆತಗಳು ಇರುವುದರಿಂದ ಸಾರ್ವಜನಿಕ ವಾಹನ ಸವಾರರಿಗೆ ಓಡಾಡಲು ತುಂಬಾ ಕಷ್ಟಕರವಾಗಿರುತ್ತದೆ. ಇದರಿಂದ ಸಾರ್ವಜನಿಕರಿಗೆ ಅನಾನುಕೂಲವಾಗಿರುತ್ತದೆ ಎಂದು ತಿಳಿಸಿದ್ದ ಮೇರೆಗೆ ಸದರಿ ಡೆಬ್ರಿಸ್‌ಅನ್ನು ಭಾಗಶಃ ತೆರವುಗೊಳಿಸಲಾಗಿರುತ್ತದೆ ಎಂದು ತಿಳಿಸಲಾಗಿರುತ್ತದೆ. ಅದರಂತೆ ಪ್ರಸ್ತುತ ಉಳಿದ ಡೆಬ್ರಿಸನ್ನು ತೆರವುಗೊಳಿಸಿ ಸಾರ್ವಜನಿಕ ಓಡಾಟಕ್ಕೆ ಅನುಕೂಲ ಮಾಡಿಕೊಡಲಾಗಿರುತ್ತದೆ ಎಂದು ಸಹಾಯಕ ಅಭಿಯಂತರು – ಬಿಡಬ್ಲ್ಯೂಎಸ್ಎಸ್‌ಬಿ ರವರು ತಿಳಿಸಿದರು.

ವಾರ್ಡ್ ವ್ಯಾಪ್ತಿಯ ಪ್ರಗತಿಪುರದಲ್ಲಿ 4ನೇ, 6ನೇ, 7ನೇ ಮತ್ತು 8ನೇ ಅಡ್ಡರಸ್ತೆಗಳಲ್ಲಿ ರಸ್ತೆಗುಂಡಿಗಳು ಇದ್ದುದ್ದರಿಂದ ಸದರಿ ರಸ್ತೆಗುಂಡಿಗಳನ್ನು ಮುಚ್ಚಲಾಗಿ ಸಾರ್ವಜನಿಕ ಓಡಾಟಕ್ಕೆ ಅನುಕೂಲ ಮಾಡಿಕೊಡಲಾಗಿರುತ್ತದೆ ಎಂದು ಸಹಾಯಕ ಅಭಿಯಂತರರು ತಿಳಿಸಿರುತ್ತಾರೆ.

ಅಧ್ಯಕ್ಷರು ರವರು ಸಭೆಯನ್ನು ಉದ್ದೇಶಿಸಿ ಮಾತನಾಡಿ ಪ್ರಸ್ತುತ ಮಳೆಯಾಗುತ್ತಿರುವ ಹಿನ್ನಲೆಯಲ್ಲಿ ವಾರ್ಡ್ ಮಟ್ಟದ ಶೋಲ್ಡರ್ ಡ್ರೈನ್ ಮತ್ತು ಡೆಬ್ರಿಸ್‌ಗಳನ್ನು ಆಗಿಂದಾಗ್ಗೆ ಸ್ವಚ್ಛಗೊಳಿಸುವಂತೆ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.

ಕ್ರಮ: ಸ.ಅ (ವಾರ್ಡ್ 180)

ವಾರ್ಡ್ ವ್ಯಾಪ್ತಿಯಲ್ಲಿ ಪ್ರತಿದಿನ ಕಸವನ್ನು ಸ್ವಚ್ಛಗೊಳಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕಕೊಡುವಂತೆ ಕಿರಿಯ ಆರೋಗ್ಯ ಪರಿವೀಕ್ಷಕರು ರವರಿಗೆ ಸೂಚಿಸಲಾಯಿತು.

ಕ್ರಮ: ಕಿರಿಯ ಆರೋಗ್ಯ ಪರಿವೀಕ್ಷಕರು

ಈ ಎಲ್ಲಾ ವಿಷಯದ ಬಗ್ಗೆ ಚರ್ಚಿಸಲಾಗಿ ಸೂಕ್ತ ಕ್ರಮ ಕೈಗೊಳ್ಳುವ ನಿರೀಕ್ಷಣೆಯೊಂದಿಗೆ ಸಮಿತಿಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಗಳಾದ ಶ್ರೀ. ಸತೀಶ್ ಕುಮಾರ್ ರವರು ಎಲ್ಲರಿಗೂ ವಂದನೆಗಳನ್ನು ಕೋರುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ನೋಡೆಲ್ ಅಧಿಕಾರಿ
ವಾರ್ಡ್ ಸಂಖ್ಯೆ 180
ಬನಶಂಕರಿ ದೇವಸ್ಥಾನ